# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 80 | Pages. 2 | Date: 25-02-2026, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 80 – ಪುಟಗಳು : 2 | 25-02-2026 | ಬುಧವಾರ | Ph: 8762954248 | ದರ : ₹1


# ಕಾಲ ಹರಣ ಸಂಸ್ಕೃತಿ ಎಂದಿಗೂ ಸಹಿಸುವುದಿಲ್ಲ

## ಅಧಿಕಾರಿಗಳಿಗೆ ಶಾಸಕ ಸಿಮೆಂಟ್ ಮಂಜು ಎಚ್ಚರಿಕೆ | ಪ್ರಗತಿ ಪರಿಶೀಲನಾ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸಾರ್ವಜನಿಕ ಸೇವೆಗಾಗಿಯೇ ನಿಯೋಜನೆಗೊಂಡಿರುವ ಅಧಿಕಾರಿಗಳು ನಿರ್ಲಕ್ಷ್ಯ ತೋರದೆ ಕೆಲಸ ಮಾಡಬೇಕು. ಕಾಲ ಹರಣ ಸಂಸ್ಕೃತಿಯನ್ನು ನಾನು ಒಪ್ಪುವುದಿಲ್ಲ ಎಂದು ಶಾಸಕ ಸಿಮೆಂಟ್ ಮಂಜು ಖಡಕ್ ಸೂಚನೆ ನೀಡಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಪ್ರಗತಿ ಪರಿಶೀಲನಾ ಸಭೆಯಲ್ಲಿ, ಮಾಹಿತಿ ನೀಡದೆ ಗೈರಾಗಿದ್ದ ಲೋಕೋಪಯೋಗಿ ಇಲಾಖೆಯ ಎಇಇ ಮುರುಗೇಶ್ ಅವರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಶಾಸಕರು, ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ಸಂಬಂಧಿಸಿ ಸಮರ್ಪಕ ಮಾಹಿತಿ ಕೊಡದೆ ಸಭೆಗೆ ಬಾರದಿರುವುದು ನಿರ್ಲಕ್ಷ್ಯದ ಪರಮಾವಧಿ. ಸಾರ್ವಜನಿಕರ ಕೆಲಸ ಮಾಡುವಾಗ ನಿರ್ಲಕ್ಷ್ಯ ವಹಿಸಬಾರದು. ಕರ್ತವ್ಯ ಲೋಪ ಎಸಗುವುದನ್ನು ಯಾವ ಕಾರಣಕ್ಕೂ ಸಹಿಸುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬೇಸಿಗೆಯಲ್ಲಿ ಕುಡಿಯುವ ನೀರಿಗೆ ತೊಂದರೆ ಆಗದಂತೆ ಎಚ್ಚರ ವಹಿಸಬೇಕು. ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಬಾರದು. ಹಿಂದುಳಿದ ವರ್ಗಗಳ ಕಲ್ಯಾಣ ವತಿಯಿಂದ ಹೆತ್ತೂರು ಹಾಗು ಆಜಾದ್ ರಸ್ತೆ ಭಾಗದಲ್ಲಿರುವ ಬಾಡಿಗೆ ಕಟ್ಟಡಗಳ ಸ್ಥಿತಿ ಪರಿಶೀಲಿಸಿ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ಕಪ್ಪಿನಕೋಡಿ ಪ್ರದೇಶದ ಶಿಥಿಲಾವಸ್ಥೆಯ ಕಟ್ಟಡಗಳ ದುರಸ್ತಿಗೆ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಕಾಶ್ ಮಾತನಾಡಿ, ಸ್ಪ್ರಿಂಕ್ಲರ್ ನೀರಾವರಿ ಘಟಕಗಳಿಗೆ ಬೇಡಿಕೆ ಹೆಚ್ಚಿದ್ದು, ಅನುದಾನ ಕಡಿಮೆ ಇದೆ. 2000 ಮೆಣಸು




ಬೆಳೆಗಾರರಿಗೆ 400 ಕೋಟಿ ರೂ. ವಿಮೆ ಬಂದಿದೆ ಎಂದರು.

ಪಶುವೈದ್ಯಕೀಯ ಇಲಾಖೆ ಸಹಾಯಕ ನಿರ್ದೇಶಕ ವೆಂಕಟೇಶ್ ಮಾತನಾಡಿ, ತಾಲ್ಲೂಕಿನಲ್ಲಿ ಪಶುವೈದ್ಯಕೀಯ ಇಲಾಖೆಗೆ 68 ಸಿಬ್ಬಂದಿ ಅಗತ್ಯವಿದ್ದರೂ ಕೇವಲ 16 ಮಂದಿ ಮಾತ್ರ ಕಾರ್ಯನಿರ್ವಹಿಸುತ್ತಿದ್ದಾರೆ. ಖಾಲಿ ಹುದ್ದೆ ಭರ್ತಿ ಮಾಡಲು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

ಶಾಸಕ ಸಿಮೆಂಟ್ ಮಂಜು ಪ್ರತಿಕ್ರಿಯಿಸಿ, ಪಶು ಇಲಾಖೆಯ ಆ್ಯಂಬುಲೆನ್ಸ್ ಸೇವೆ ಬೆಳಿಗ್ಗೆ 9 ರಿಂದ ಸಂಜೆ 5ರ ವರೆಗೆ ಮಾತ್ರ ಸೀಮಿತವಾಗಿದ್ದು, ಎರಡು ಪಾಳಿಯಲ್ಲಿ ವಿಸ್ತರಣೆ ಮಾಡಲು ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು.

ಕ್ರಾಫರ್ಡ್ ಆಸ್ಪತ್ರೆಯಲ್ಲಿ ಸೋಮವಾರ ಮತ್ತು ಗುರುವಾರ ರೋಗಿಗಳು ಸರದಿ ಸಾಲಿನಲ್ಲಿ ನಿಲ್ಲುವ ಸಮಸ್ಯೆ ಉಂಟಾಗುತ್ತಿದೆ. ಹೀಗಾಗಿ ಹೆಚ್ಚುವರಿ ಕೌಂಟರ್ ತೆರೆಯಬೇಕೆಂದು ಆಸ್ಪತ್ರೆ ವೈದ್ಯಾಧಿಕಾರಿ ಡಾ. ಅರುಣ್ ಕುಮಾರ್ ಅವರಿಗೆ ಸೂಚಿಸಿದರು.

12 ವರ್ಷ ಹಳೆಯ ಸ್ಕ್ಯಾನಿಂಗ್ ಯಂತ್ರ ತುಕ್ಕು ಹಿಡಿಯುವಂತಾಗಿದೆ. ಪರ್ಯಾಯ ಯಂತ್ರಕ್ಕೆ ವ್ಯವಸ್ಥೆ ಮಾಡಿಕೊಳ್ಳಬೇಕು. ಆಸ್ಪತ್ರೆಯಲ್ಲಿ ಸ್ವಚ್ಛತೆ, ದಾಖಲೆ ನಿರ್ವಹಣೆ ಹಾಗು ಕಸ ವಿಲೇವಾರಿ ಕ್ರಮಬದ್ಧವಾಗಿರಬೇಕು ಎಂದರು.

ಅಂಗನವಾಡಿ ಕೇಂದ್ರಗಳಿಗೆ ಹೋಗಿ ಸ್ಥಳ ಪರಿಶೀಲನೆ ಮಾಡಿ, ಉದ್ಘಾಟನೆ ಆಗದ ಕಟ್ಟಡಗಳ ಮಾಹಿತಿ ನೀಡಬೇಕು. ಹಲವಾರು ಅಂಗನವಾಡಿಗಳಲ್ಲಿ ವಿದ್ಯುತ್ ಕಡಿತ ಸಮಸ್ಯೆ ಇದೆ. ವಾಟರ್ ಫಿಲ್ಟರ್‌ಗಳು ಗೋದಾಮಿನಲ್ಲಿದ್ದು ಕೂಡಲೇ ವಿತರಿಸಬೇಕು ಎಂದು ಸೂಚಿಸಿದರು.

ಪಟ್ಟಣದಲ್ಲಿ ಫ್ಲೆಕ್ಸ್ ಹಾವಳಿ ಮಿತಿ ಮೀರಿದೆ. ಕಾನೂನು ಪ್ರಕಾರ ಶುಲ್ಕ ಪಾವತಿಸಿಕೊಂಡು ಅನುಮತಿ ನೀಡಬೇಕು. ಯಾವುದೇ ರಾಜಕಾರಣಿ ಅಥವಾ ಸಂಸ್ಥೆಗಳ ಬ್ಯಾನರ್ ಆದರೂ ಒಂದು ವಾರವಷ್ಟೇ ಅವಕಾಶ ನೀಡಬೇಕು.

### ತಾರತಮ್ಯ ನೀತಿಗೆ ಖಂಡನೆ

ತಾಲೂಕಿಗೆ ಬಿಡುಗಡೆಯಾಗಿದ್ದ 25.90 ಕೋಟಿ ರೂ. ಅತಿವೃಷ್ಟಿ ಪರಿಹಾರವನ್ನು ಕಲಬುರಗಿ ಜಿಲ್ಲೆಗೆ ವರ್ಗಾಯಿಸಿರುವುದನ್ನು ಖಂಡಿಸುತ್ತೇನೆ. ಈ ಬಗ್ಗೆ ಸಂಬಂಧಪಟ್ಟ ಸಚಿವರು, ಅಧಿಕಾರಿಗಳೊಂದಿಗೆ ಚರ್ಚಿಸುತ್ತೇನೆಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು. ನಿರಂತರ ಮಳೆಯಿಂದ ತಾಲ್ಲೂಕಿನಲ್ಲಿ ಸಾಕಷ್ಟು ಹಾನಿಯುಂಟಾಗಿದೆ. ಕಾಡಾನೆ ಹಾವಳಿಯಿಂದ ಮಲೆನಾಡು ಭಾಗದ ಜನರು ತತ್ತರಿಸಿದ್ದಾರೆ. ಈ ನಡುವೆ ಬಿಡುಗಡೆಯಾಗಿದ್ದ ಅನುದಾನವನ್ನೂ ಬೇರೆ ಜಿಲ್ಲೆಗೆ ವರ್ಗಾಯಿಸುವುದು ಯಾವ ನ್ಯಾಯವೆಂದು ಪ್ರಶ್ನಿಸಿದರು.

ಪಟ್ಟಣ ವ್ಯಾಪ್ತಿಯಲ್ಲಿ ಪ್ರತಿ ವಿದ್ಯುತ್ ಕಂಬಗಳಿಗೂ ಬಲ್ಬ್ ಅಳವಡಿಸಿಕೊಳ್ಳಲು ಕ್ರಮ ಕೈಗೊಳ್ಳಬೇಕು. ಎಲ್ಲಾ ಸರ್ಕಾರಿ ಆಸ್ತಿಗಳಿಗೂ ದಾಖಲಾತಿ ಮಾಡಬೇಕೆಂದು ನಿರ್ದೇಶನ ನೀಡಿದರು.

ಹದಿಹರೆಯದ ಯುವಕರು ದುಶ್ಚಟಗಳಿಗೆ ದಾಸರಾಗುತ್ತಿದ್ದಾರೆ. ಮದ್ಯ ಸೇವಿಸಿ ಬೈಕ್, ಕಾರು ಚಾಲನೆ ಮಾಡುತ್ತಿರುವವರ ಸಂಖ್ಯೆ ಹೆಚ್ಚುತ್ತಿದೆ. ಗ್ರಾಮಾಂತರ ಪ್ರದೇಶಗಳಲ್ಲಿ ದಿನಸಿ ಅಂಗಡಿಗಳಲ್ಲಿ ಮದ್ಯ ಮಾರಾಟವಾಗುತ್ತಿರುವ ಬಗ್ಗೆ ದೂರು ಬಂದಿದೆ. ಕೂಲಿ ಕಾರ್ಮಿಕರು ಮದ್ಯಪಾನದಿಂದ ಕೆಲಸಕ್ಕೆ ಸಿಗದ ಪರಿಸ್ಥಿತಿ ಉಂಟಾಗಿದೆ. ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಬೇಕೆಂದು ಅಧಿಕಾರಿಗಳಿಗೆ ಹೇಳಿದರು.

ಉಪವಿಭಾಗಾಧಿಕಾರಿ ಮಂಜುನಾಥ್, ತಹಶೀಲ್ದಾರ್ ಸುಪ್ರಿತಾ, ಕಾರ್ಯನಿರ್ವಹಣಾಧಿಕಾರಿ ಗಂಗಾಧರ್, ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ಡಿವೈಎಸ್‌ಪಿ ಮಾಲತೇಶ್ ಮತ್ತಿತರರಿದ್ದರು.

# ಬಾಣಂತಿ ಸಾವು: ವೈದ್ಯರ ನಿರ್ಲಕ್ಷ್ಯ ಆರೋಪ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹೆರಿಗೆಗಾಗಿ ದಾಖಲಾಗಿದ್ದ ಗರ್ಭಿಣಿ ಚಿಕಿತ್ಸೆ ವೇಳೆ ಮೃತಪಟ್ಟಿದ್ದು, ವೈದ್ಯರ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿ ಮೃತೆ ಸಂಬಂಧಿಕರು ಆಸ್ಪತ್ರೆ ಎದುರು ಮಂಗಳವಾರ ಪ್ರತಿಭಟನೆ ನಡೆಸಿದರು.

ತಾಲೂಕಿನ ಹೆರಗು ಹನುಮನಹಳ್ಳಿಯ ನಿವಾಸಿ, ಕೆ.ಆರ್. ಪೇಟೆ ಸಮೀಪದ ಚಿಕ್ಕಗಾಡೇನಹಳ್ಳಿ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಅತಿಥಿ ಶಿಕ್ಷಕಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಶೃತಿ (30) ಮೃತರು. ೧ ಕೆ.ಆರ್ ಪೇಟೆ ಡಿಪೋದಲ್ಲಿ ಬಸ್ ಚಾಲಕರಾಗಿರುವ ಪುನೀತ್ ಅವರ ಪತ್ನಿ. ಶೃತಿ ಅವರು ಫೆ. 22ರಂದು ಹೆರಿಗೆಗಾಗಿ ನಗರದ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಹಿಮ್ಸ್)ನ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ದಾಖಲಾಗಿದ್ದರು. ಬಳಿಕ ಸಾಮಾನ್ಯ ಹೆರಿಗೆ ನಡೆದು, ಹೆಣ್ಣು ಮಗುವಿಗೆ ಜನ್ಮ ನೀಡಿದ್ದರು.

ಆದರೆ ಹೆರಿಗೆ ಬಳಿಕ ಮಹಿಳೆಯ ಆರೋಗ್ಯ ಏಕಾಏಕಿ ಹದಗೆಟ್ಟಿದ್ದು, ತಕ್ಷಣ ರಕ್ತದ ಅವಶ್ಯಕತೆ ಇದೆ ಎಂದು ವೈದ್ಯರು ತಿಳಿಸಿದರು ಎಂದು ಕುಟುಂಬಸ್ಥರು ಹೇಳಿದ್ದಾರೆ. ಸಂಬಂಧಿಕರು ತಕ್ಷಣವೇ ರಕ್ತದ ವ್ಯವಸ್ಥೆ ಮಾಡಿಕೊಟ್ಟಿದ್ದರೂ, ನಂತರ ಮಹಿಳೆಯನ್ನು ಬೇರೆ ಆಸ್ಪತ್ರೆಗೆ ಕರೆದುಕೊಂಡು ಹೋಗುವಂತೆ ವೈದ್ಯರು ಸೂಚನೆ ನೀಡಿದರು. ಆದರೆ ಮಾರ್ಗಮಧ್ಯೆ ಶೃತಿ ಮೃತಪಟ್ಟಿದ್ದಾರೆ ಎಂದು ಪತಿ ಪುನೀತ್ ಆರೋಪಿಸಿದ್ದಾರೆ.

ಪ್ರಸೂತಿ ತಜ್ಞೆ ಸುಮಾ ಅವರೇ ಹೆರಿಗೆ ಮಾಡಿಸಿದ್ದರೂ, ನಂತರ ಸರಿಯಾದ ಸಮಯದಲ್ಲಿ ಚಿಕಿತ್ಸೆ ನೀಡದಿರುವುದರಿಂದಲೇ ಶೃತಿ ಸಾವನ್ನಪ್ಪಿದ್ದಾರೆ ಎಂದು ಕುಟುಂಬಸ್ಥರು ಆಕ್ರೋಶ ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ ಮೃತಳ ಪತಿ ಹಾಗೂ ಸಂಬಂಧಿಕರು ಆಸ್ಪತ್ರೆಗೆ ಎದುರು ಪ್ರತಿಭಟನೆ ನಡೆಸಿ, ವೈದ್ಯರ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಇನ್ನೊಂದೆಡೆ, ನವಜಾತ ಹೆಣ್ಣು ಮಗು ಹಿಮ್ಸ್‌ನ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಮಗುವಿನ ಸ್ಥಿತಿ ಸ್ಥಿರವಾಗಿದೆ ಎಂದು ಮೂಲಗಳು ತಿಳಿಸಿವೆ. ನಗರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

# ಸಂಪ್ರದಾಯ ಹೆಸರಿನಲ್ಲಿ ಹೆಣ್ಣು ಮಕ್ಕಳ ಮೇಲೆ ಮೌಢ್ಯಾಚರಣೆ ಸಲ್ಲದು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಂಪ್ರದಾಯ, ದೈವಿಕತೆಯ ಹೆಸರಿನಲ್ಲಿ ಹೆಣ್ಣು ಮಕ್ಕಳ ಮೇಲೆ ನಿರಂತರವಾಗಿ ಮೌಢ್ಯಾಚರಣೆ ನಡೆಸಿಕೊಂಡು ಬರುತ್ತಿದ್ದು ಅವರ ಮನಸ್ಸಿನ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶೆ ಜಿ.ಕೆ.ದಾಕ್ಷಾಯಿಣಿ ಅಸಮಾಧಾನ ವ್ಯಕ್ತಪಡಿಸಿದರು.

ಅರಸೀಕೆರೆ ತಾಲೂಕಿನ ಕಣಕಟ್ಟೆ ಹೋಬಳಿಯ ಗೋಪಾಲಪುರ ಗ್ರಾಮ ಕೆ. ಗೊಲ್ಲರಹಟ್ಟಿಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲ್ಲೂಕು ಕಾನೂನು ಸೇವಾ ಸಮಿತಿ, ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಬಾಲ್ಯ ವಿವಾಹ ನಿಷೇಧ, ಭೇಟಿ ಬಚಾವೋ ಬೇಟಿ ಪಡಾವೋ




ಮತ್ತು ಮೌಢ್ಯಾಚರಣೆ ನಿಷೇಧ ಕಾಯ್ದೆ ಹಾಗೂ ಸಾಮಾಜಿಕ ನ್ಯಾಯ ದಿನದ ಕುರಿತಾಗಿ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಬ್ಬ ಹೆಣ್ಣು ಮಕ್ಕಳು ವಿದ್ಯಾವಂತರಾಗುವ ಮೂಲಕ ಸಮಾಜದ ಮೌಢ್ಯತೆ ಮೆಟ್ಟಿ ನಿಲ್ಲಬೇಕಿದೆ. ಈ ನಿಟ್ಟಿನಲ್ಲಿ ಸರ್ಕಾರವು ಸಾಮಾಜಿಕ ಬಹಿಷ್ಕಾರ, ಮೌಢ್ಯ ನಿಷೇಧದಂತಹ ಕಾಯ್ದೆಗಳನ್ನು ಜಾರಿಗೆ ತಂದಿದೆ. ಗ್ರಾಮೀಣ ಭಾಗದಲ್ಲಿ ಅದರಲ್ಲಿಯೂ ಗೊಲ್ಲ ಸಮುದಾಯದಲ್ಲಿ ಇನ್ನೂ ಸಹ ಇಂತಹ ಆಚರಣೆಗಳು ನಡೆಯುತ್ತಿರುವುದು ವಿಷಾದನೀಯ ಎಂದರು.

ಸರ್ಕಾರವು ಹೆಣ್ಣು ಮಕ್ಕಳ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದರೂ ಕಟ್ಟುನಿಟ್ಟಾಗಿ ಪರಿಣಾಮಕಾರಿಯಾಗಿ ಆಚರಣೆಗೆ ತರಲು ಇನ್ನು ಸಾಧ್ಯವಾಗಿಲ್ಲ. ಸಂಪ್ರದಾಯದ ಹೆಸರಿನಲ್ಲಿ ನಡೆಯುತ್ತಿರುವ ಮೂಢನಂಬಿಕೆಗಳ ಆಚರಣೆಯು ಕೇವಲ ಒಂದು ದಿನದಲ್ಲಿ ಬಗೆಹರಿಯುವ ಸಮಸ್ಯೆ ಅಲ್ಲ ಎಂದು ತಿಳಿಸಿದರು.

ಹೆಣ್ಣು ಮಕ್ಕಳು ಶಿಕ್ಷಿತರಾದಂತೆ ಪುರುಷ ಪ್ರಧಾನ ಸಮಾಜದ ವಿರುದ್ಧ, ಅಸಂಪ್ರಾಯದಾಯಿಕ ಆಚರಣೆಗಳ ವಿರುದ್ಧ, ಮೂಢನಂಬಿಕೆಗಳ ವಿರುದ್ಧ ಹೋರಾಡಲು ಬಲಬಂದಂತಾಗುತ್ತದೆ. ಋತುಚಕ್ರ, ಬಾಣಂತನ ಸಮಯದಲ್ಲಿ ಹೆಣ್ಣು ಮಕ್ಕಳನ್ನು ಊರ ಹೊರಗೆ ಇಡುವುದು, ಕಾನೂನು ಬಾಹಿರ. ಹೆಣ್ಣು ಮಕ್ಕಳ ಮೇಲೆ ದೇವರು, ಧರ್ಮ, ಸಂಪ್ರದಾಯ ಹಾಗೂ ವೈಯಕ್ತಿಕ ಹೆಸರಿನಲ್ಲಿ ದೌರ್ಜನ್ಯ ಸಲ್ಲದು. ಇಂತಹ ಅನಿಷ್ಟ ಪದ್ಧತಿಗೆ ಪ್ರೋತ್ಸಾಹ ನೀಡಿದವರು ಸಹ ಕಾನೂನು ರೀತಿಯ ಶಿಕ್ಷೆಗೆ ಅರ್ಹರಾಗಿರುತ್ತಾರೆ ಎಂದು ಎಚ್ಚರಿಕೆ ನೀಡಿದರು.

ಅರಸೀಕೆರೆ ನ್ಯಾಯಾಲಯದ ಹಿರಿಯ ಸಿವಿಲ್ ನ್ಯಾಯಾಧೀಶ ಕಿರಣ್ ಕುಮಾರ್ ಡಿ. ವಡಿಗೇರಿ ಮಾತನಾಡಿ, ಸರ್ಕಾರಗಳು ಹೆಣ್ಣು ಮಕ್ಕಳ ಸುರಕ್ಷತೆ ಹಾಗೂ ಸ್ವಾವಲಂಬನೆಗಾಗಿ ಹಲವು ಯೋಜನೆ ಮತ್ತು ವಿಶೇಷ ಕಾಯ್ದೆಗಳನ್ನು ಜಾರಿಗೆ ತಂದಿದ್ದರು ಸಹ ಅವು ಸರಿಯಾದ ಕ್ರಮದಲ್ಲಿ ಜಾರಿಯಾಗುತ್ತಿಲ್ಲ. ಹೆಣ್ಣು ಮಕ್ಕಳ ಮಾನಸಿಕ, ದೈಹಿಕವಾಗಿ ಹಾಗೂ ಭವಿಷ್ಯಕ್ಕೆ ಅಡ್ಡಿ ಉಂಟು ಮಾಡುತ್ತದೆ. ಸಂಪ್ರದಾಯದ ಹೆಸರಿನಲ್ಲಿ ಮೌಢ್ಯತೆಯು ಸರಿಯಾದ ಕ್ರಮವಾಗಿಲ್ಲ ಎಲ್ಲರೂ ಕೂಡ ಸುಶಿಕ್ಷಿತರಾದರೆ ಇಂತಹ ಸಮಸ್ಯೆಗಳನ್ನು ಬೇರು ಸಮೇತ ಕಿತ್ತೊಗೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ತಹಶೀಲ್ದಾರ್ ಸಂತೋಷ ಕುಮಾರ್ ಮಾತನಾಡಿದರು. ತಾಲೂಕು ಆರೋಗ್ಯ ಅಧಿಕಾರಿ ಡಾ. ಮಂಜುಳಾ, ಬಾಣಾವರ ಪೊಲೀಸ್ ಠಾಣೆ ಆರಕ್ಷಕ ನಿರೀಕ್ಷಕ ಸುರೇಶ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಎಸ್. ಪರಶಿವಮೂರ್ತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಯೋಗೀಶ್, ಹಿಂದುಳಿದ ವರ್ಗಗಳ ವಸತಿ ಶಾಲೆಗಳ ವಿಸ್ತರಣಾಧಿಕಾರಿ ಯಶೋಧ, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಇಲಾಖೆಯ ಅಧಿಕಾರಿ ರೂಪವತಿ ಇತರರಿದ್ದರು.

# ಪೂರಕ ವಾತಾವರಣ: ಅಧಿಕ ಇಳುವರಿ ನಿರೀಕ್ಷೆಯಲ್ಲಿ ಮಾವು ಬೆಳೆಗಾರರು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಈ ಬಾರಿ ಹಣ್ಣುಗಳ ರಾಜ ಮಾವಿನ ಮರಗಳು ಹೆಚ್ಚು ಹೂವುಗಳಿಂದ ಮೈದುಂಬಿಕೊಂಡಿದ್ದು ಅಧಿಕ ಆದಾಯದ ನಿರೀಕ್ಷೆಯಲ್ಲಿ ಬೆಳೆಗಾರರು ಇದ್ದಾರೆ.

ಡಿಸೆಂಬರ್‌ನಿಂದಲೇ ಹೂವು ಬಿಡುವ ಪ್ರಕ್ರಿಯೆ ಆರಂಭವಾಗಿದ್ದು, ಈಗಾಗಲೇ ಸಣ್ಣ ಸಣ್ಣ ಕಾಯಿ-ಕುಸುರಿಗಳಾಗಿ ಫಸಲು ಹಿಡಿಯುತ್ತಿರುವುದನ್ನು ಕಾಣಬಹುದಾಗಿದೆ. ನಾಟಿ ಸೇರಿ ರಸಪುರಿ, ಬಾದಾಮಿ, ಮಲ್ಲಿಕಾ, ತೋತಾಪುರಿ ಹಾಗು ವಿವಿಧ ತಳಿಗಳ ಮಾವಿನ ಮರಗಳಲ್ಲಿ ಫಸಲು ದೊರೆಯುವ ಸಾಧ್ಯತೆ ಹೆಚ್ಚಾಗಿದೆ ಎಂದು ಬೆಳೆಗಾರರು ಹರ್ಷ ವ್ಯಕ್ತಪಡಿಸಿದ್ದಾರೆ.

ಕಳೆದ ವರ್ಷ ಫಸಲು ಹಿಡಿಯುವ ಹಂತದಲ್ಲಿ ಅಕಾಲಿಕ ಆಲಿಕಲ್ಲು ಮಳೆ ಹಾಗೂ ಹವಾಮಾನ ವೈಪರೀತ್ಯದಿಂದ ಸಮಸ್ಯೆಯಾಗಿತ್ತು. ಹೂವು ಉದುರುವುದು, ಕೀಟ ಬಾಧೆ ಮತ್ತು ನಿಶ್ಚಿತ ಮಾರುಕಟ್ಟೆ ಪರಿಣಾಮ ರೈತರು ನಷ್ಟ ಅನುಭವಿಸುವಂತಾಗಿತ್ತು. ಈ ಬಾರಿ ಉತ್ತಮ ಫಸಲು ಹಾಗೂ ಲಾಭದ ನಿರೀಕ್ಷೆ ಇದೆಯೆಂದು ಪಿ.ಹೊಸಹಳ್ಳಿ ಗ್ರಾಮದ ರೈತ ಹೆಚ್. ಕೆ.ಗೋವಿಂದರಾಜು ಹೇಳಿದರು. ಈಗಾಗಲೇ ಮಾವಿನ ಹಣ್ಣುಗಳ ವ್ಯಾಪಾರಸ್ಥರು, ಗುತ್ತಿಗೆದಾರರು ಹಾಗೂ ಮಧ್ಯವರ್ತಿಗಳು ರೈತರನ್ನು ಸಂಪರ್ಕಿಸಿ ಫಸಲಿನ ಆಧಾರದ ಮೇಲೆ ಮುಂಗಡ ಹಣ ನೀಡಿ ಒಪ್ಪಿಗೆ ಮಾಡಿಕೊಳ್ಳುತ್ತಿದ್ದಾರೆ. ಆದರೆ, ಮಾರುಕಟ್ಟೆಯಲ್ಲಿ ಬೆಲೆ ಕುಸಿತದ ಭೀತಿ ಇರುವ ಕಾರಣ ಸರ್ಕಾರ ಕೂಡಲೇ ಮಾವು ಬೆಳೆಗೆ ಬೆಂಬಲ ಬೆಲೆ ಘೋಷಿಸಬೇಕೆಂದು ಸಾವಯವ ಕೃಷಿಕ ವಗರಹಳ್ಳಿ ಪ್ರವೀಣ್ ಒತ್ತಾಯಿಸಿದ್ದಾರೆ.

ತೋಟಗಾರಿಕೆ ಇಲಾಖೆ ಸಲಹೆ: ತಾಲ್ಲೂಕಿನಾದ್ಯಂತ 170 ಎಕರೆ ಪ್ರದೇಶದಲ್ಲಿ 8,500 ಮಾವಿನ ಮರಗಳಿವೆ. ಹೂವಿನ ಹಂತದಲ್ಲಿ ಕೀಟನಾಶಕ ಸಿಂಪಡಿಸಬಾರದು. ಬೆಳೆ ಯಾವುದೇ ಇರಲಿ ಪರಾಗಸ್ಪರ್ಶ ಕ್ರಿಯೆ ನಡೆಯುವ ಹಂತದಲ್ಲಿ ಸಾಕಷ್ಟು ಜಾಗೃತಿ ವಹಿಸಬೇಕು. ಫಸಲು ಹಿಡಿಯುವ ಹಂತದಲ್ಲಿ ಅಧಿಕಾರಿಗಳು ಇಲ್ಲವೇ ತಜ್ಞರ ಸಲಹೆ ಅಗತ್ಯವೆಂದು ತೋಟಗಾರಿಕೆ ಅಧಿಕಾರಿ ತಿಳಿಸಿದ್ದಾರೆ.

ಸಾವಯವ ಕೃಷಿಕ ಪ್ರವೀಣ್ ಮಾತನಾಡಿ, ಈ ಬಾರಿ ಮಾವಿನ ಮರಗಳಲ್ಲಿ ಹೆಚ್ಚು ಹೂವುಗಳು ಪಸರಿಸಿದ್ದು ನಿರೀಕ್ಷೆ ಮೀರಿ ಫಸಲು ದೊರೆಯುವ ಸಾಧ್ಯತೆ ಇದೆ. ಸರ್ಕಾರವು ಇತ್ತ ಗಮನಿಸಿ ಉತ್ತಮ ಮಾರುಕಟ್ಟೆ ಕಲ್ಪಿಸುವುದರ ಜೊತೆಗೆ ಬೆಂಬಲ ಬೆಲೆ ನಿಗದಿಪಡಿಸಬೇಕೆಂದು ಆಗ್ರಹಿಸಿದರು.

ಪ್ರಭಾರ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಬಿ.ಆರ್. ಶಿವಕುಮಾರ್ ಮಾತನಾಡಿ, ಚನ್ನರಾಯಪಟ್ಟಣ ತಾಲ್ಲೂಕಿನಾದ್ಯಂತ 170 ಎಕರೆ ಪ್ರದೇಶದಲ್ಲಿ ಮಾವು ಬೆಳೆ ಕೈಗೊಳ್ಳಲಾಗಿದೆ. ಹೂವು ಹಿಡಿಯುವ ಹಾಗೂ ಕಾಯಿ ಕಟ್ಟುವ ಹಂತದಲ್ಲಿ ಸೂಕ್ತ ಕ್ರಮ ವಹಿಸುವ ಬಗ್ಗೆ ಇಲಾಖೆಯ ತಜ್ಞರ ಸಲಹೆ ಪಡೆಯಬೇಕು. ಅಲ್ಲದೆ, ಹನಿ ನೀರಾವರಿ ಹಾಗೂ ಹಣ್ಣು ಮಾಗಿಸಲು ಇಲಾಖೆಯಿಂದ ಸಿಗುವ ಸೌಲಭ್ಯಗಳ ಪ್ರಯೋಜನ ಪಡೆಯಬೇಕು ಎಂದರು.

# ಸಕಲೇಶಪುರ: ಮಳಲಿ ಸಮೀಪದ ಅಕ್ರಮ ಮರಳು ಅಡ್ಡೆ ಮೇಲೆ ದಾಳಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಅಕ್ರಮ ಮರಳು ಗಣಿಗಾರಿಕೆ ಅಡ್ಡೆ ಮೇಲೆ ಸೋಮವಾರ ರಾತ್ರಿ ದಿಢೀರ್ ದಾಳಿ ನಡೆಸಿದ ತಹಶೀಲ್ದಾರ್ ಸುಪ್ರಿತಾ ಹಾಗೂ ಅಧಿಕಾರಿಗಳು ಎರಡು ಟಿಪ್ಪರ್‌ಗಳೊಂದಿಗೆ ಮರಳನ್ನು ವಶಕ್ಕೆ ಪಡೆದಿದ್ದಾರೆ.

ತಾಲ್ಲೂಕಿನ ಮಳಲಿ ಸಮೀಪ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಲಾಯಿತು. ಮರಳು ಸಾಗಿಸುತ್ತಿದ್ದ ಟಿಪ್ಪರ್ ವಾಹನಗಳಿಗೆ ಅಡ್ಡಲಾಗಿ ಅಧಿಕೃತ ವಾಹನ ನಿಲ್ಲಿಸಿದ ತಹಶೀಲ್ದಾರ್ ವಾಹನ ವಶಕ್ಕೆ ಪಡೆದಿದ್ದಾರೆ.ತಾಲೂಕಿನಲ್ಲಿ ಇತ್ತೀಚೆಗೆ ಅಕ್ರಮ ಮರಳು ದಂಧೆ ಹೆಚ್ಚಾಗುತ್ತಿರುವ ಹಿನ್ನೆಲೆ ತಾಲೂಕು ಆಡಳಿತ ಹಾಗೂ ರಾಜಸ್ವ ಇಲಾಖೆ ಅಧಿಕಾರಿಗಳು ನಿರಂತರವಾಗಿ ವಿಶೇಷ ದಾಳಿ ನಡೆಸುತ್ತಿದ್ದಾರೆ. ಅಧಿಕಾರಿಗಳು ಕಠಿಣ ಕ್ರಮ ಜಾರಿಗೊಳಿಸಿದ್ದರೂ ಮರಳು ಮಾಫಿಯಾ ವಿವಿಧ ಮಾರ್ಗಗಳನ್ನು ಬಳಸಿಕೊಂಡು ವಿಶೇಷವಾಗಿ ರಾತ್ರಿ ವೇಳೆಯಲ್ಲಿ ಅವ್ಯಾಹತವಾಗಿ ನಡೆಯುತ್ತಿದೆ. ಕಳೆದ ಎರಡು ವಾರಗಳಿಂದ ಪಟ್ಟಣ ಸಮೀಪದ ಶ್ರೀನಿವಾಸ ಕನ್ವೆನ್ಷನ್ ಹಾಲ್ ಬಳಿ ಹರಿಯುವ ಹೇಮಾವತಿ ಹೊಳೆ ದಂಡೆಯಿಂದ ಟಿಪ್ಪರ್ ವಾಹನಗಳ ಮೂಲಕ ಅಧಿಕಾರಿಗಳ ಕಣ್ಣುತಪ್ಪಿಸಿ ಅಕ್ರಮವಾಗಿ ಮರಳು ಸಾಗಾಟ ನಡೆಸುತ್ತಿರುವ ಕುರಿತು ಸಾರ್ವಜನಿಕರಿಂದ ನಿರಂತರ ದೂರುಗಳು ಕೇಳಿಬರುತ್ತಿದೆ.

# ಅರೇಮಾದನಹಳ್ಳಿ ಮಠದಲ್ಲಿ ಇಂದಿನಿಂದ ಧಾರ್ಮಿಕ ಕೈಂಕರ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಫೆ. 25 ಹಾಗೂ 26ರಂದು ಅರಕಲಗೂಡು ತಾಲ್ಲೂಕಿನ ಅರೇಮಾದನಹಳ್ಳಿ ವಿಶ್ವಬ್ರಾಹ್ಮಣ ಮಹಾಸಂಸ್ಥಾನ ಮಠದಲ್ಲಿ ಶ್ರೀ ಮಠದ ಉತ್ತರಾಧಿಕಾರಿಗಳಿಗೆ ಸನ್ಯಾಸ ದೀಕ್ಷೆ ಮತ್ತು ಶಿಷ್ಯ ಸ್ವೀಕಾರ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ವಿಶ್ವಕರ್ಮ ಸಮಾಜ ಅಧ್ಯಕ್ಷ ಹೆಚ್ .ವಿ.ಹರೀಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಉತ್ತರಾಧಿಕಾರಿಗಳು ಸಂಸ್ಕೃತ ಅಧ್ಯಯನ ಮಾಡಿದ್ದು ಎಂಜಿನಿಯರಿಂಗ್ ಪದವೀಧರರಾಗಿದ್ದಾರೆ. ಹಿಮಾಲಯದ ಹೃಷಿಕೇಷದ ದಯಾನಂದ ಸರಸ್ವತಿ ಆಶ್ರಮದಲ್ಲಿ ವೇದಾಧ್ಯಯನ ಮಾಡಿದ್ದಾರೆ ಎಂದರು.

ಸಮಾರಂಭದ ಸಾನ್ನಿಧ್ಯವನ್ನು ಅರೇಮಾದನಹಳ್ಳಿ ಮಠದ ಪ್ರಸ್ತುತ ಪೀಠಾಧ್ಯಕ್ಷ ಶ್ರೀ ಶಿವಸುಜ್ಞಾನತೀರ್ಥ ಸ್ವಾಮೀಜಿ ವಹಿಸುವರು. ಬೆಳಿಗ್ಗೆಯಿಂದಲೇ ಧಾರ್ಮಿಕ ಕಾರ್ಯಕ್ರಮಗಳು




ಪ್ರಾರಂಭವಾಗಲಿದ್ದು, ದಶವಿಧ ಸ್ನಾನ, ಅಷ್ಟ ಶ್ರದ್ಧಾದಿ ಕಾರ್ಯ, ವಿರಜಾ ಹೋಮ, ಫೆ. 26ರಂದು ರಾಮನಾಥಪುರದ ಕಾವೇರಿ ನದಿಯಲ್ಲಿ ಸನ್ಯಾಸ ದೀಕ್ಷೆ, ಶ್ರೀ ಸುಜ್ಞಾನಪ್ರಭು ಸ್ವಾಮೀಜಿ ಸಮಾಧಿಸ್ಥ ಅಧಿಷ್ಠಾನದಲ್ಲಿ ಶಿಷ್ಯ ಸ್ವೀಕಾರ ಹಾಗು ಮಹಾವಾಕ್ಯೋಪದೇಶ ನೆರವೇರಲಿದೆ ಎಂದರು. ಕಾರ್ಯಕ್ರಮದಲ್ಲಿ ಶ್ರೀ ಮೂರು ಝಾವಾಧೀಶ್ವರ ಮಠದ ರಾಮಚಂದ್ರ ಸ್ವಾಮೀಜಿ, ಕಾಳಹಸ್ತೇಂದ್ರ ಶ್ರೀ, ಶ್ರೀ ಶಂಕರಾತ್ಮಾನಂದ ಸರಸ್ವತಿ, ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ಶಿವಾನಂದ ಭಾರತಿ ಸ್ವಾಮೀಜಿ, ಬಸವರಾಜೇಂದ್ರ ಸ್ವಾಮೀಜಿ ಸೇರಿ ಅನೇಕ ಮಠಾಧೀಶರು ಭಾಗವಹಿಸುವರು. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಸಂಸದ ಶ್ರೇಯಸ್ ಪಟೇಲ್, ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ, ಉಪಸ್ಥಿತಿ ವಹಿಸುವರು. ಅರಕಲಗೂಡು ಶಾಸಕ ಎ.ಮಂಜು ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ವಿಶ್ವಕರ್ಮ ಸಮಾಜ ಮಾಜಿ ಅಧ್ಯಕ್ಷ ಬಿ.ಸಿ.ಶಂಕರಾಚಾರ್, ಉಪಾಧ್ಯಕ್ಷ ಎ.ಸಿ.ನಾರಾಯಣ್, ಕೆ.ವಿ.ಯೋಗೇಶ್, ಚಂದ್ರಶೇಖರ್, ಬಿ.ಲೋಕೇಶ್, ನರೇಂದ್ರಾಚಾರ್ ಇತರರಿದ್ದರು.

# ಕರೀಂಖಾನ್-ಅಮೃತ ಕಾವ್ಯ ಪ್ರಶಸ್ತಿ ಪ್ರದಾನ ಸಮಾರಂಭ

ಹಾಸನ: ಸಕಲೇಶಪುರ ತಾಲೂಕಿನ ಬೆಳ್ಳೇಕೆರೆ ಜೈ ಕರ್ನಾಟಕ ಸಂಘದಿಂದ ಫೆ. 28ರ ಶನಿವಾರ ಎಸ್. ಕೆ.ಕರೀಂಖಾನ್ ಸೌಹಾರ್ದ ಪ್ರಶಸ್ತಿ ಹಾಗೂ ಅಮೃತ ಕಾವ್ಯ ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ತಾಲೂಕಿನ ರಕ್ಷಿದಿ ಗ್ರಾಮದಲ್ಲಿರುವ ಪೂರ್ಣಚಂದ್ರ ತೇಜಸ್ವಿ ರಂಗ ಮಂದಿರದಲ್ಲಿ ಶನಿವಾರ ಸಂಜೆ 6 ಗಂಟೆಗೆ ಸಮಾರಂಭ ಪ್ರಾರಂಭವಾಗಲಿದೆ. ಎಸ್.ಕೆ.ಕರೀಂಖಾನ್ ಸೌಹಾರ್ದ ಪ್ರಶಸ್ತಿಗೆ ಕೆ.ಜಿ.ಎಫ್.ಅಚ್ಯುತ, ಅಮೃತ ಕಾವ್ಯ ಪ್ರಶಸ್ತಿಗೆ ಮಧು ಕಾರಗಿ ಹಾಗೂ ವಿನಯ್ ಗುಂಟೆ ಭಾಜನರಾಗಿದ್ದಾರೆ.

ತತ್ವಪದ ಗಾಯನ ಹಾಗೂ ರಂಗಗೀತೆ, ಜಾನಪದ ಗೀತೆ ಗಾಯನ ನೆರವೇರಲಿದೆ. ಕವಿತಾ ಸುಬ್ಬಯ್ಯ ಕಾರ್ಯಕ್ರಮ ಉದ್ಘಾಟಿಸುವರು. ಕ್ಯಾಮನಹಳ್ಳಿ ಗ್ರಾಮ ಪಂಚಾಯಿತಿ ನಿಕಟಪೂರ್ವ ಅಧ್ಯಕ್ಷ ಎಂ.ಜೆ.ಮಲ್ಲೇಶ್ ಅಧ್ಯಕ್ಷತೆ ವಹಿಸುವರು. ಶಾಸಕ ಸಿಮೆಂಟ್ ಮಂಜು, ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಪುರುಷೋತ್ತಮ್ ಬಿಳಿಮಲೆ, ಸಮಾಜ ಕಲ್ಯಾಣ ಇಲಾಖೆ ಅಪರ ನಿರ್ದೇಶಕ ಡಾ.ದೇವರಾಜ್, ರಂಗ ನಿರ್ದೇಶಕ ಕೆ.ಜಿ.ಮಹಾಬಲೇಶ್ವರ್ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

# ಗಣಿಗಾರಿಕೆಯಿಂದ ತೊಂದರೆ: ತಿಂಗಳಿಂದ ಶಾಲೆಗೆ ಮಕ್ಕಳು ಗೈರು

## ಅರಕಲಗೂಡು ತಾಲ್ಲೂಕಿನ ನೆಹರು ನಗರದಲ್ಲಿ ಘಟನೆ I ಫಲ ನೀಡದ ಸಭೆಗಳು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲ್ಲೂಕಿನ ನೆಹರುನಗರ ಸಮೀಪದ ಖಾಸಗಿ ಕಲ್ಲು ಗಣಿಗಾರಿಕೆಯಿಂದ ಮಕ್ಕಳ ವಿದ್ಯಾಭ್ಯಾಸ ಹಾಗು ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದ್ದು, ಕ್ರಷರ್ ಸ್ಥಳಾಂತರ ಮಾಡುವ ತನಕ ಮಕ್ಕಳನ್ನು ಶಾಲೆಗೆ ಕಳುಹಿಸುವುದಿಲ್ಲವೆಂದು ಪೋಷಕರು ಪಟ್ಟು ಹಿಡಿದಿದ್ದಾರೆ.

ಈ ಪರಿಣಾಮ ಕಳೆದ ಒಂದು ತಿಂಗಳಿಂದ 16 ಮಕ್ಕಳು ಶಾಲೆಗೆ ಗೈರಾಗಿ ಶಿಕ್ಷಣದಿಂದ ವಂಚಿತರಾಗಿದ್ದಾರೆ. ತಾಲ್ಲೂಕಿನ ಮಲ್ಲಿಪಟ್ಟಣ ಹೋಬಳಿ ನೆಹರುನಗರ ಗ್ರಾಮದಲ್ಲಿ 50ಕ್ಕೂ ಹೆಚ್ಚು ದಲಿತ ಕುಟುಂಬಗಳು ವಾಸವಿವೆ. ಎಲ್ಲರೂ ಹೇಮಾವತಿ ಮುಳುಗಡೆ ಪ್ರದೇಶದಿಂದ ಬಂದವರೇ ಆಗಿದ್ದಾರೆ. ಸರ್ಕಾರದ ಪುನರ್ವಸತಿ ಗ್ರಾಮ ಇದಾಗಿದೆ. ಕೊಣನೂರು-ಮಲ್ಲಿಪಟ್ಟಣ ರಾಜ್ಯ ಹೆದ್ದಾರಿಯಲ್ಲಿ ಬರುವ ಗ್ರಾಮವಾಗಿದೆ. ಇಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಕಾರ್ಯನಿರ್ವಹಿಸುತ್ತಿದ್ದು, 1 ರಿಂದ 5ನೇ ತರಗತಿ ವರೆಗೆ 16 ಮಕ್ಕಳು ವ್ಯಾಸಂಗ ಮಾಡುತ್ತಿವೆ.

ಈ ಸಾಲಿನ ಶೈಕ್ಷಣಿಕ ಅವಧಿ ಮುಗಿಯುವ ಹಂತಕ್ಕೆ ಬಂದಿದ್ದು, ಮಕ್ಕಳು ಮಾತ್ರ ಒಂದು ತಿಂಗಳಿಂದ ಶಾಲೆಯನ್ನು ತೊರೆದು ಶಿಕ್ಷಣ ಸೇರಿ ಶಾಲೆಯಲ್ಲಿ ಸಿಗುವ ಇತರೆ ಮೂಲಸೌಕರ್ಯಗಳಿಂದಲೂ ವಂಚಿತರಾಗಿದ್ದಾರೆ. ಕ್ರಷರ್ ಮತ್ತು ಪೋಷಕರ ನಡುವೆ ಉಂಟಾಗಿರುವ ಶೀತಲ ಸಮರ ಮಕ್ಕಳ ಕಲಿಕೆ ಮೇಲೆ ಪರಿಣಾಮ ಬೀರುತ್ತಿದೆ. ಈ ಸಮಸ್ಯೆ ನಿವಾರಣೆ, ಪರಿಹಾರಕ್ಕೆ ನೆಹರುನಗರ ವಿದ್ಯಾವಂತ ಯುವಕರು, ಸಂಘಟನೆಗಳಲ್ಲಿ ತೊಡಗಿರುವವರಿಗೆ ಅಷ್ಟೇನು ಕಷ್ಟಸಾಧ್ಯವಿಲ್ಲ. ಮೊದಲು ಮಕ್ಕಳ ಶಿಕ್ಷಣ ದೃಷ್ಟಿಯಿಂದ ನಿರ್ಧಾರಕ್ಕೆ ಬರುವ ಬದಲು ಯಾವುದೋ ಕಾರಣಕ್ಕೇ ಒಳಗಾಗಿ ಮಕ್ಕಳ ಭವಿಷ್ಯದ ಮೇಲೆ ಚೆಲ್ಲಾಟವಾಡುತ್ತಿದ್ದಾರೆ.

**ಪೋಷಕರಿಂದ ಪತ್ರ:** ನೆಹರುನಗರ ಗ್ರಾಮದಿಂದ 200 ಮೀಟರ್ ಅಂತರದಲ್ಲಿ ಕಾರ್ಯಾರಂಭ ಮಾಡುತ್ತಿರುವ ಖಾಸಗಿ ಕಷರ್‌ನಿಂದ ಮಕ್ಕಳಿಗೆ ತೊಂದರೆಯಾಗುತ್ತಿದೆ. ಅಲ್ಲದೆ ಗ್ರಾಮಸ್ಥರು ಕೂಡ ನೆಮ್ಮದಿಯಿಂದ ಜೀವನ ಮಾಡಲು ಆಗುತ್ತಿಲ್ಲ. ಅಂತಿಮವಾಗಿ ಕ್ರಷರ್ ಸ್ಥಳಾಂತರ ಮಾಡುವ ತನಕ ಮಕ್ಕಳನ್ನು ನಾವು ಶಾಲೆಗೆ ಕಳುಹಿಸುವುದಿಲ್ಲವೆಂಬ ಮನವಿ ಪತ್ರವನ್ನು ಪೋಷಕರು ಪ್ರತ್ಯೇಕವಾಗಿ ಮುಖ್ಯಶಿಕ್ಷಕರಿಗೆ ಬರೆದುಕೊಟ್ಟಿದ್ದಾರೆ.

**ಶಿಕ್ಷಕರಿಂದ ಮನೆ ಭೇಟಿ, ಸಭೆ:** ಶಾಲೆಗೆ ಮಕ್ಕಳನ್ನು ಕಳುಹಿಸುವಂತೆ ಶಿಕ್ಷಣ ಇಲಾಖೆ ಅಧಿಕಾರಿಗಳು, ಶಾಲಾ ಶಿಕ್ಷಕರು ಅನೇಕ ಬಾರಿ ಗ್ರಾಮಕ್ಕೆ ತೆರಳಿ ಮಕ್ಕಳ ಮನೆಗೆ ಭೇಟಿ ಮಾಡಿ ವಿನಂತಿ ಮಾಡುತ್ತಿದ್ದರೂ ಕೂಡ ಪ್ರಯೋಜನಕ್ಕೆ ಬರುತ್ತಿಲ್ಲ. ಅಲ್ಲದೆ ನಿಮ್ಮ ಗ್ರಾಮದ ಮನೆ, ದೇವಸ್ಥಾನದಲ್ಲಿ ಮಕ್ಕಳಿಗೆ ಪಾಠ ಮಾಡುವುದಾಗಿ ಶಿಕ್ಷಕರು ಬೇಡಿಕೊಂಡರೂ ಪೋಷಕರಿಂದ ಸ್ಪಂದನೆ ದೊರೆಯುತ್ತಿಲ್ಲ. ಬೆಳಿಗ್ಗೆ 9.30ಕ್ಕೆ ಶಾಲೆಗೆ ಬರುವ ಇಬ್ಬರು ಶಿಕ್ಷಕರು ಮಕ್ಕಳಿಲ್ಲದೆ ಶಾಲಾ ಕೊಠಡಿಯಲ್ಲಿ ಕುಳಿತು ಸಂಜೆ 4.30ಕ್ಕೆ ವಾಪಾಸ್ಸಾಗುತ್ತಾರೆ. ಬಳಿಕ ಮನೆಗೆ ಬರುವ ಬದಲು ಇಲಾಖೆಯ ಹಿರಿಯ ಅಧಿಕಾರಿಗಳ ನಿರ್ದೇಶನದ ಮೇರೆಗೆ ಸಂಜೆ 7ರಿಂದ ಗ್ರಾಮದಲ್ಲಿ ಪೋಷಕರು, ವಿದ್ಯಾರ್ಥಿಗಳ ಸಭೆ ನಡೆಸಿ ಶಾಲೆಗೆ ಮಕ್ಕಳನ್ನು ಕಳುಹಿಸಿ, ಇಲ್ಲವಾದರೇ ನೀವು ಎಲ್ಲಿ ಸೂಚಿಸುತ್ತೀರಾ ಅಲ್ಲಿಯೇ ಮಕ್ಕಳಿಗೆ ಪಾಠ ಮಾಡುತ್ತೇವೆಂದು ಮನವೊಲಿಸುವ ಪ್ರಯತ್ನದಲ್ಲಿ ತೊಡಗಿದ್ದಾರೆ.

ತಾಲ್ಲೂಕಿನ ಅರಸೀಕಟ್ಟೆ ಕಾವಲ್ ಸರ್ವೆ ನಂಬರ್ 116ರಲ್ಲಿ ಈ ಹಿಂದೆಯೇ ಖಾಸಗಿ ಒಡೆತನದಲ್ಲಿ ಕ್ರಷರ್ ಕಾರ್ಯನಿರ್ವಹಿಸುತ್ತಿದೆ. ಅದರೊಂದಿಗೆ ಮುದಗನೂರು ಕಾವಲ್‌ನಲ್ಲಿಯೂ ಮತ್ತೊಂದು ಕ್ರಷರ್ ನಡೆಯುತ್ತಿದೆ. ಈ ಭಾಗದಲ್ಲಿನ ಸರ್ಕಾರಿ ಪ್ರದೇಶದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಂಡೆಗಳು ಇರುವ ಕಾರಣ ಮತ್ತೊಂದು ಕ್ರಷರ್‌ಗೆ ಅನುಮತಿ ನೀಡಲಾಗಿದೆ. ಈ ಭಾಗದಲ್ಲಿಯೂ ಕೂಡ ಸರ್ಕಾರಿ ಶಾಲೆ, ಜನವಸತಿ ಪ್ರದೇಶ ಇದ್ದು, ಇದುವರೆಗೂ ಯಾವುದೇ ಆಕ್ಷೇಪಣೆ ಹಳೆಯ ಎರಡು ಕ್ರಷರ್‌ಗಳಿಗೆ ಬಂದಿಲ್ಲ. ಈ ಇಬ್ಬರು ಮಾಲೀಕರು ಪ್ರಭಾವಿಗಳಾಗಿರುವ ಕಾರಣ ಅವರ ಕಲ್ಲುಗಣಿಗಾರಿಕೆಯಿಂದ ಸಾಕಷ್ಟು ತೊಂದರೆಗಳು ಎದುರಾಗುತ್ತಿದ್ದರೂ ಕೂಡ ಜನರು ಇವರ ವಿರುದ್ಧ ಧ್ವನಿ ಎತ್ತಲು ಸಾಧ್ಯವಾಗಿಲ್ಲ.



> ಈಗಾಗಲೇ ಶಾಸಕರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ವಿದ್ಯಾರ್ಥಿಗಳ ಪೋಷಕರು, ಗ್ರಾಮಸ್ಥರು, ರೈತ ಸಂಘ, ವಿವಿಧ ಸಂಘಟನೆಗಳ ಸಮ್ಮುಖದಲ್ಲಿ ಸಭೆ ನಡೆಸಿ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆ ಕೊಡುವುದು ಬೇಡ ಮೊದಲು ಮಕ್ಕಳನ್ನು ಶಾಲೆಗೆ ಕಳುಹಿಸಿ, ಕ್ರಷರ್‌ಗೆ ಸಂಬಂಧಿಸಿ ಜಿಲ್ಲಾಧಿಕಾರಿ ಕ್ರಮವಹಿಸುತ್ತಾರೆಂದು ಹೇಳಲಾಗಿದೆ. ಮಕ್ಕಳು ಶಾಲೆಗೆ ಬರುವ ವಿಶ್ವಾಸವಿದೆ.
>
> **– ಕೆ.ಸಿ.ಸೌಮ್ಯ, ತಹಶೀಲ್ದಾರ್**

> ಶಾಲೆಗೆ ಮಕ್ಕಳನ್ನು ಕಳುಹಿಸುವಂತೆ ಅನೇಕ ಬಾರಿ ನೆಹರುನಗರ ಪೋಷಕರಲ್ಲಿ ಮನವಿ ಮಾಡಲಾಗಿದೆ. ಯಾವುದೇ ಸ್ಪಂದನೆ ದೊರೆಯುತ್ತಿಲ್ಲ. ಶಾಲೆಗೆ ಮಕ್ಕಳು ಗೈರಾಗುತ್ತಿರುವ ಬಗ್ಗೆ ತಾಲ್ಲೂಕು ಆಡಳಿತ ಸೇರಿ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಲಿಖಿತ ಮನವಿ ಸಲ್ಲಿಸಲಾಗಿದೆ. ಹಿರಿಯ ಅಧಿಕಾರಿಗಳ ಮಾರ್ಗದರ್ಶನದ ಮೇರೆಗೆ ಮುಂದಿನ ಕ್ರಮ ವಹಿಸಲಾಗುವುದು.
>
> **– ಕೆ.ಪಿ.ನಾರಾಯಣ, ಕ್ಷೇತ್ರ ಶಿಕ್ಷಣಾಧಿಕಾರಿ**



# ಸ್ಕೌಟ್ಸ್ ಅಂಡ್ ಗೈಡ್ಸ್ ಸಂಸ್ಥಾಪಕರ ಜನ್ಮ ದಿನಾಚರಣೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭಾರತ್ ಸ್ಕೌಟ್ಸ್ ಅಂಡ್ ಗೈಡ್ ಸ್ಥಳೀಯ ಸಂಸ್ಥೆ ಹಾಗೂ ಪೋದಾರ್ ಇಂಟರ್ನ್ಯಾಷನಲ್ ಶಾಲೆ ವತಿಯಿಂದ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥಾಪಕ ಲಾರ್ಡ್ ಬೆಡನ್ ಪೊವೆಲ್ ಅವರ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಸ್ಕೌಟ್ಸ್ ಅಂಡ್ ಗೈಡ್ಸ್ ಜಿಲ್ಲಾ ಮುಖ್ಯ ಆಯುಕ್ತ ಡಾ. ವೈ.ಎಸ್. ವೀರಭದ್ರಪ್ಪ ಮಾತನಾಡಿ, ಸೇವೆ, ಕೌಶಲ ಹಾಗೂ ವ್ಯಕ್ತಿತ್ವ ಬೆಳವಣಿಗೆ ಮೂಲಕ ನಾವು ಬೆಳೆಯುತ್ತಾ ದೇಶದ ಬೆಳವಣಿಗೆಗೂ ಕೊಡುಗೆ ನೀಡಲು ನಾವು ಸದೃಢರಾಗಬೇಕು. ಇದು ಬೇಡನ್ ಪೊವೆಲ್ ಅವರ ಕನಸು ಎಂದರು.

ತಾಲ್ಲೂಕು ಕಾರ್ಯದರ್ಶಿ ಬಿ.ಎಸ್.ವನಜಾಕ್ಷಿ ಮಾತನಾಡಿ, ಸ್ಕೌಟ್ಸ್ ಅಂಡ್ ಗೈಡ್ಸ್ ಶತಮಾನ ಪೂರೈಸಿ ಪ್ರಪಂಚದಾದ್ಯಂತ ತನ್ನದೇಯಾದ ನೆಲೆ ಕಟ್ಟಿಕೊಂಡಿದೆ. ಯುವಕರಲ್ಲಿ ಸದೃಢ ವ್ಯಕ್ತಿತ್ವ ರೂಪಿಸುವುದರೊಂದಿಗೆ ಮಾತೃಪ್ರೇಮ, ದೇಶ ಪ್ರೇಮ, ಪರಿಸರ ಪ್ರಜ್ಞೆ, ಸ್ವಚ್ಛತೆ ಅರಿವು ಹಾಗು ವ್ಯಕ್ತಿತ್ವ ನಿರ್ಮಾಣಕ್ಕೆ ಅಪಾರ ಕೊಡುಗೆ ನೀಡುತ್ತಿದೆ. ಇಲ್ಲಿ ಸದಸ್ಯರಾಗುವುದು ಸದಾವಕಾಶ. ಎಲ್ಲರೂ ಸಕ್ರಿಯವಾಗಿ ಪಾಲ್ಗೊಳ್ಳಬಹುದು ಎಂದರು.

ಏಕಲವ್ಯ ಓಪನ್ ಗ್ರುಪ್‌ನ ಆರ್.ಜಿ.ಗಿರೀಶ್ ಮಾತನಾಡಿ, ಇರುವುದೊಂದೇ ಭೂಮಿ ಗೌರವಿಸಿ ಪೋಷಿಸಬೇಕೆಂದರು. ಭಾಷಣ ಮತ್ತು ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತ ಮಕ್ಕಳಿಗೆ ಬಹುಮಾನ ನೀಡಲಾಯಿತು. ಪೋದಾರ್ ಶಾಲೆಯ ಸ್ಕೌಟ್ಸ್ ಶಿಕ್ಷಕ ನೂತನ್, ಅಂಜನಾ ಮತ್ತಿತರರಿದ್ದರು.

# ಯರೇಬರೆ ಕಾವಲಿನಲ್ಲಿ ಗಣಿಗಾರಿಕೆ ನಿಷೇಧಕ್ಕೆ ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸ್ಮಶಾನ ಜಾಗದಲ್ಲಿ ಕಲ್ಲು ಗಣಿಗಾರಿಕೆ ನಡೆಸಲು ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳು ಪರವಾನಗಿ ನೀಡಿದ್ದು ಕೂಡಲೇ ರದ್ದುಪಡಿಸಿ ಗ್ರಾಮಸ್ಥರಿಗೆ ಅನುಕೂಲ ಮಾಡಿಕೊಡಬೇಕೆಂದು ತಾಲ್ಲೂಕಿನ ಯರೇಬರೆ ಕಾವಲು ಗ್ರಾಮದ ಆನಂದ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸರ್ವೆ ನಂ.83ರ ಸ್ಮಶಾನ ಜಾಗದಲ್ಲಿ ಗಣಿಗಾರಿಕೆ ನಡೆಸಲು ಸಮ್ಮತಿ ದೊರೆತಿದೆ. ಸಾರ್ವಜನಿಕ ಆಸ್ತಿಯನ್ನು ದುರುಪಯೋಗ ಮಾಡಿಕೊಳ್ಳಲಾಗುತ್ತಿದೆ. ಅದಕ್ಕೆ ಹೊಂದಿಕೊಂಡಂತೆ ಮನೆಗಳು ಇರುವುದರಿಂದ ಸಮಸ್ಯೆಯಾಗುತ್ತದೆ. ಒಟ್ಟು 5 ಎಕರೆ 20 ಗುಂಟೆ ಜಮೀನಿನಲ್ಲಿ 2 ಎಕರೆ ಜಾಗವನ್ನು ಸ್ಮಶಾನಕ್ಕಾಗಿ ಕಾಯ್ದಿರಿಸಲಾಗಿದೆ.

ಕಾನೂನು ಪ್ರಕಾರ ಜನನಿಬೀಡ ಪ್ರದೇಶದಿಂದ 200 ಮೀಟರ್ ದೂರದಲ್ಲಿ ಗಣಿಗಾರಿಕೆ ನಡೆಸಬೇಕು. ಆದರೆ 100 ಮೀಟರ್ ಅಂತರದಲ್ಲೇ ಮನೆಗಳಿವೆ. ಸ್ಮಶಾನ ಮತ್ತು ರಸ್ತೆಯಿಂದ ಅಂತರ ಕಾಯ್ದುಕೊಳ್ಳದೆ ಗುತ್ತಿಗೆ ಮಂಜೂರು ಮಾಡಿರುವುದು ಕಾನೂನುಬಾಹಿರವೆಂದು ಆರೋಪಿಸಿದರು.

ಸ್ಮಶಾನಕ್ಕೆ ಹೊಂದಿಕೊಂಡಂತೆ ಸುಮಾರು 72 ಆಶ್ರಯ ಮನೆಗಳಿವೆ. ನಾವು ಕಂದಾಯ ಕಟ್ಟುತ್ತಿದ್ದರೂ, ಈ ವರೆಗೂ ಹಕ್ಕು ಪತ್ರ ನೀಡಿಲ್ಲವೆಂದು ಅಳಲು ತೋಡಿಕೊಂಡರು.

ಕಲ್ಲು ಗಣಿಗಾರಿಕೆ ನಡೆಸಿದರೆ ಮನೆಗಳಿಗೆ ಮಾತ್ರವಲ್ಲದೆ, ಪರಿಸರಕ್ಕೆ ಹಾನಿಯಾಗಲಿದೆ. ಶಬ್ದ ಮಾಲಿನ್ಯ ಹಾಗು ಸಾರ್ವಜನಿಕರ ಭಾವನೆಗಳಿಗೆ ಧಕ್ಕೆಯಾಗಲಿದೆ. ಈ ಸಂಬಂಧ ಕಳೆದ 10 ತಿಂಗಳಿಂದ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ ಸೇರಿ ಎಲ್ಲಾ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಸ್ಥಳೀಯ ಶಾಸಕರು ಹಾಗು ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಪರಿಶೀಲನೆ ನಡೆಸಿ ನ್ಯಾಯ ಒದಗಿಸಬೇಕು. ನಿವಾಸಿಗಳಿಗೆ ಹಕ್ಕುಪತ್ರ ವಿತರಿಸಬೇಕೆಂದು ಒತ್ತಾಯಿಸಿದರು.

# ಮಾ.15ರ ಒಳಗೆ ಅನುದಾನ ಪೂರ್ಣ ಬಳಕೆಯಾಗಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲ್ಲೂಕಿನ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳು ನಿಯೋಜನೆಗೊಂಡಿದ್ದು, 15ನೇ ಹಣಕಾಸು ಯೋಜನೆಯ ಹಣವನ್ನು ಮಾರ್ಚ್ 18ರ ಒಳಗೆ ಬಳಕೆಯಾಗಬೇಕೆಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ, ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಎಂ.ಬಾಬು ಸೂಚಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಇನ್ನೂ 15ನೇ ಹಣಕಾಸು ಯೋಜನೆ ಅನುದಾನ ಹಂಚಿಕೆ ಕುರಿತು ಕ್ರಿಯಾಯೋಜನೆ ಸಿದ್ದಪಡಿಸಿಲ್ಲ. ಬಾಕಿ ಉಳಿದಿರುವುದು 20 ದಿನಗಳು ಬಾಕಿ ಇದೆ.

ಇಷ್ಟೊಂದು ಕಡಿಮೆ ಅವಧಿಯಲ್ಲಿ ಹೇಗೆ ಅನುದಾನ ಹಂಚಿಕೆ ಕಾರ್ಯಾದೇಶ ಪಡೆಯುವುದು ಯಾವಾಗ, ಅನುದಾನ ಬಳಕೆಮಾಡಲು ಸಾಧ್ಯವೇ. ಇಂತಹ ಪಂಚಾಯಿತಿಯ ಆಡಳಿತಾಧಿಕಾರಿಗಳು ಇಂದಿನಿಂದಲೇ ಕಾರ್ಯಪ್ರವೃತ್ತರಾಗಬೇಕಿದೆ. 15ನೇ ಹಣಕಾಸು ಯೋಜನೆ ಸಂಪೂರ್ಣ ಬಳಕೆಯಾಗದಿದ್ದರೇ 16ನೇ ಹಣಕಾಸು ಅನುದಾನ ಬರುವುದಿಲ್ಲ ಎಂದು ಎಚ್ಚರಿಸಿದರು.

### ಇ-ಖಾತಾ ಆಂದೋಲನ

ಗ್ರಾಮ ಪಂಚಾಯಿತಿಗಳಲ್ಲಿ ಅತೀ ಜರೂರಾಗಿ ಆಸ್ತಿಗಳ ಖಾತೆಗಳು ಆಗಬೇಕಿದೆ. ಅದರಲ್ಲಿಯೂ ಪ್ರಮುಖವಾಗಿ ಇ-ಖಾತೆಯನ್ನು ಕೈಗೊಳ್ಳುವ ಸಲುವಾಗಿ ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇ-ಖಾತಾ ಆಂದೋಲನ ಹಮ್ಮಿಕೊಂಡು ನಿಗದಿತ ಅವಧಿಯೊಳಗೆ ಗುರಿ ಮುಟ್ಟಬೇಕಿದೆ. ಇದು ಆಡಳಿತಾಧಿಕಾರಿಗಳ ಲಾಗಿನ್‌ನಲ್ಲಿಯೇ ಆಗಬೇಕಿದೆ. ಅದಕ್ಕೆ ಅಗತ್ಯವಿರುವ ಮಾಹಿತಿಯನ್ನು ಒಂದು ವಾರದೊಳಗೆ ಪಂಚಾಯಿತಿಗಳಿಗೆ ಸಲ್ಲಿಸಬೇಕೆಂದು ಸಭೆಯಲ್ಲಿ ಗ್ರಾ.ಪಂ. ಆಡಳಿತಾಧಿಕಾರಿಗಳಿಗೆ ಸೂಚನೆ ನೀಡಿದರು.



**ಮೋಟಾರ್ ಪಂಪ್ ಅಳವಡಿಸಿ:** ತಾಲ್ಲೂಕಿನಲ್ಲಿ ಜೆಜೆಎಂ ಕಾಮಗಾರಿ ಪ್ರಗತಿಯಲ್ಲಿದೆ. ಸುಮಾರು 20 ಗ್ರಾ.ಪಂ. ವ್ಯಾಪ್ತಿಯಲ್ಲಿ ಕೊಳವೆಬಾವಿ ಕೊರೆದಿದ್ದು, ಇನ್ನೂ ಕೂಡ ಮೋಟಾರ್, ಪಂಪ್ ಅಳವಡಿಸಿಲ್ಲ. ಈಗಾಗಲೇ ಬೇಸಿಗೆ ಆರಂಭಗೊಂಡಿರುವ ಪರಿಣಾಮ ಕುಡಿಯುವ ನೀರಿಗೆ ಅಭಾವ ಉಂಟಾಗುವ ಸಾಧ್ಯತೆ ಇದೆ. ಕೂಡಲೇ ಮೋಟಾರ್ ಪಂಪ್ ಅಳವಡಿಸುವ ಕೆಲಸ ಕೈಗೊಳ್ಳಬೇಕೆಂದು ಜೆಜೆಎಂ ಎಇಇ ನವೀನ್ ಅವರಿಗೆ ಇಒ ಶ್ರೀನಿವಾಸ್ ಮಾಹಿತಿ ನೀಡಿದರು.

**ಜಿ ರಾಮ್ ಜಿ ಗೆ ಒತ್ತು ನೀಡಿ:** ಈ ಸಾಲಿನಿಂದ ಗ್ರಾ.ಪಂ. ವ್ಯಾಪ್ತಿಯಲ್ಲಿ ಅನುಷ್ಟಕ್ಕೆ ಬರುವ ಜಿ ರಾಮ್ ಜಿ ಯೋಜನೆಯ ಬಳಕೆ ಕುರಿತು ಯೋಜನೆ ಸಿದ್ಧಗೊಳ್ಳಬೇಕಿದೆ. ಹೊಸ ಯೋಜನೆಯಡಿ ಈ ಹಿಂದೆ ಕೈಗೊಳ್ಳಲಾಗುತ್ತಿದ್ದ ಕಾಮಗಾರಿಗಳನ್ನು ಕೈಗೊಳ್ಳುವುದು ಕಷ್ಟಕರವಾಗಿದೆ. ಈ ಸಲುವಾಗಿ ಹೊಸದಾಗಿ ಕಾಮಗಾರಿ ಸಿದ್ಧಗೊಳಿಸಿಕೊಳ್ಳಿ ಎಂದು ಎಂ.ಬಾಬು ಸಲಹೆ ನೀಡಿದರು.

ತೋಟಗಾರಿಕೆ ಇಲಾಖೆ ಅಧಿಕಾರಿ ರಾಜೇಶ್ ಮಾತನಾಡಿ, ತೋಟಗಾರಿಕೆ ಬೆಳೆಗಳಾದ ಅಡಿಕೆ, ತೆಂಗು ಕೃಷಿಯಲ್ಲಿ ಅಂತರ್ ಬೇಸಾಯ ಕೈಗೊಳ್ಳುವುದರಿಂದ ಉದ್ಯೋಗ ಸೃಷ್ಟಿಸಬಹುದಾಗಿದೆ. ಈ ನಿಟ್ಟಿನಲ್ಲಿ ಇಲಾಖೆ ಗಮನರಿಸಲು ಸಿದ್ಧತೆ ನಡೆಸುತ್ತಿದೆ ಎಂದು ಹೇಳಿದರು. ಅದೇ ರೀತಿ ಕೃಷಿ, ರೇಷ್ಮೆ ಇಲಾಖೆಗಳು ಈ ನಿಟ್ಟಿನಲ್ಲಿ ಮುಂದಾಗಬೇಕಿದೆ ಎಂದು ತಿಳಿಸಿದರು.

**ಅಂಬೇಡ್ಕರ್ ಭವನ ಕಾಮಗಾರಿ ಆರಂಭಿಸಿ:** ಪಟ್ಟಣದಲ್ಲಿನ ಅಂಬೇಡ್ಕರ್ ಭವನದ ಮುಂದುವರಿದ ಕಾಮಗಾರಿಗೆ ಈಗಾಗಲೇ 37 ಲಕ್ಷ ರೂ. ಅನುದಾನ ಬಿಡುಗಡೆಯಾಗಿದೆ. ಈಗಾಗಲೇ ಕೆಲಸ ಆರಂಭಗೊಂಡಿದ್ದರೇ ಬಾಕಿ 1.17 ಕೋಟಿ ರೂ. ಬರುತ್ತಿತ್ತು. ಪಂಚಾಯತ್ ರಾಜ್ ಇಲಾಖೆ ಇನ್ನೂ ಕೂಡ ಕೆಲಸ ಆರಂಭಿಸಿಲ್ಲ. ಅದರಿಂದ ಸಮುದಾಯದಿಂದ ಆರೋಪಗಳು ಕೇಳಿಬರುತ್ತಿವೆ ಎಂದು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ರವಿಕುಮಾರ್ ಸಭೆಯ ಗಮನಕ್ಕೆ ತಂದರು. ಅನುದಾನ ಬಂದು ತಿಂಗಳು ಕಳೆದಿದೆ.ಯಾಕೇ ಇನ್ನೂ ಕೆಲಸ ಆರಂಭಿಸಿಲ್ಲ ಎಂದು ಆಡಳಿತಾಧಿಕಾರಿ ಜಿಪಂ ಎಇಇ ಅವರನ್ನು ಪ್ರಶ್ನಿಸಿದರು. ಒಂದುವಾರದಲ್ಲಿ ಟೆಂಡರ್ ಪ್ರಕ್ರಿಯೆ ಮುಗಿಸಿ ಕೆಲಸ ಆರಂಭಿಸುವ ಭರವಸೆ ನೀಡಿದರು.

**ಶುದ್ಧ ನೀರು ಒದಗಿಸಿ:** ತಜ್ಞರ ಮಾಹಿತಿ ಮೇರೆಗೆ ಈ ಬಾರಿ ಬೇಸಿಗೆಯ ತಾಪಮಾನ ಅಧಿಕಗೊಳ್ಳುತ್ತದೆಂದು ಹೇಳಲಾಗುತ್ತಿದೆ. ಈ ಬಗ್ಗೆ ಸಾರ್ವಜನಿಕವಾಗಿ ಆರೋಗ್ಯ ಇಲಾಖೆ ಮಾಹಿತಿ ನೀಡುವ ಜೊತೆಗೆ ಶುದ್ಧ ನೀರು ಸರಬರಾಜಿಗೆ ಸಂಬಂಧಪಟ್ಟ ಇಲಾಖೆಗಳಿಗೆ ತಿಳವಳಿಕೆ ನೀಡುವುದು ಕಡ್ಡಾಯವಾಗಿದೆ. ಹೆಚ್ಚು ಜನರು ಸೇರುವ ಸಂತೆ, ಜಾತ್ರೆ ಇತರೆ ಸಾರ್ವಜನಿಕ ಸ್ಥಳದಲ್ಲಿ ಶುದ್ಧ ನೀರು ಸೇವನೆ ಕುರಿತು ಅರಿವು ಮೂಡಿಸಬೇಕೆಂದು ಆರೋಗ್ಯಾಧಿಕಾರಿ ಡಾ|| ಪುಷ್ಪಲತಾ ಅವರಿಗೆ ತಿಳಿಸಿದರು.

### ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಿಸಿ

ಕಳೆದ ಬಾರಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಉತ್ತಮ ಸ್ಥಾನ ಪಡೆದಿದೆ. ಈ ಬಾರಿ ಜಿಲ್ಲೆಗೆ ತಾಲ್ಲೂಕು ಮೊದಲ ಸ್ಥಾನ ಪಡೆಯಬೇಕು. ತಾಲೂಕಿನ ಎಲ್ಲಾ ಶಾಲೆಗಳ ಮಕ್ಕಳು ಅತ್ಯುತ್ತಮ ಅಂಕಗಳನ್ನು ಪಡೆದು ಶೇ.100ರಷ್ಟು ದಾಖಲೆ ಫಲಿತಾಂಶವನ್ನು ಪಡೆಯಬೇಕು. ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಂಡು ಮಕ್ಕಳನ್ನು ಸಜ್ಜುಗೊಳಿಸಬೇಕೆಂದು ಆಡಳಿತಾಧಿಕಾರಿ ಬಾಬು ಸೂಚನೆ ನೀಡಿದರು.

ಸಭೆಯಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಶ್ರೀನಿವಾಸ್, ಸಹಾಯಕ ನಿರ್ದೇಶಕ ಪ್ರಕಾಶ್ ಮತ್ತಿತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಫೆಬ್ರವರಿ-25

**1751:** ಬ್ರಿಟಿಷ್ ಲಾರ್ಡ್ ರಾಬರ್ಟ್ ಕ್ಲೈವ್ ನೇತೃತ್ವದಲ್ಲಿ ಈಸ್ಟ್ ಇಂಡಿಯಾ ಕಂಪನಿ ಸೇನೆ ಕಲ್ಕತ್ತಾವನ್ನು ಪುನಃ ವಶಪಡಿಸಿಕೊಂಡಿತು.

**1910:** ವಿ.ಕೆ. ಕೃಷ್ಣ ಮೆನನ್ ಲಂಡನ್‌ನಲ್ಲಿ ಇಂಡಿಯಾ ಲೀಗ್ ಸಂಘಟನೆಯನ್ನು ಪ್ರಾರಂಭಿಸಿದರು.

**1948:** ಕಮ್ಯುನಿಸ್ಟ್ ತತ್ವಜ್ಞ ಹಾಗೂ ಚಿಂತಕ ಕಾರ್ಲ್ ಮಾರ್ಕ್ಸ್ ರಚಿತ ಕಮ್ಯುನಿಸ್ಟ್ ಘೋಷಣಾ ಪತ್ರ ಮೊದಲ ಬಾರಿಗೆ ಪ್ರಕಟವಾಯಿತು.

**1964:** ಮೊಹಮ್ಮದ್ ಅಲಿ (ಹಿಂದಿನ ಹೆಸರು ಕ್ಯಾಸಿಯಸ್ ಕ್ಲೇ) ವಿಶ್ವ ಹೆವಿ ವೇಟ್ ಬಾಕ್ಸಿಂಗ್ ಚಾಂಪಿಯನ್ ಪಟ್ಟ ಗೆದ್ದರು.

**1994:** ಇಸ್ರೇಲ್‌ನ ಹೆಬ್ರೋನ್ ನಗರದಲ್ಲಿ ಮಸೀದಿಯಲ್ಲಿ ನಡೆದ ಗುಂಡಿನ ದಾಳಿಯಲ್ಲಿ ಹಲವರು ಸಾವನ್ನಪ್ಪಿದರು.

**2010:** ಜಗತ್ತಿನ ಅತ್ಯಂತ ಎತ್ತರದ ಗಗನಚುಂಬಿ ಕಟ್ಟಡ ಬುರ್ಜ್ ಖಲೀಫಾ ಸಾರ್ವಜನಿಕರಿಗೆ ತೆರೆಯಲಾಯಿತು.

### ಜನನ

**1894:** ಮೆಹರ್ ಬಾಬಾ (ಮೂಲ ಹೆಸರು ಮೆರ್ವಾನ್ ಶೆರಿಯಾರ್ ಇರಾನಿ)

**1988:** ಪ್ರಸಿದ್ಧ ಭಾರತಿ ನಟಿ ದಿವ್ಯ ಭಾರತಿ

**1943:** ಜಾರ್ಜ್ ಹರಿಸನ್, ಇಂಗ್ಲಿಷ್ ಸಂಗೀತಗಾರ, ದಿ ಬೀಟಲ್ಸ್ ಸದಸ್ಯ

**1957:** ರಾಜತ್ ಶರ್ಮಾ, ಹಿರಿಯ ಪತ್ರಕರ್ತ ಮತ್ತು ಟಿವಿ ನಿರೂಪಕ

### ಮರಣ

**1943:** ಸರ್ ಟೇಜ್ ಬಹಾದೂರ್ ಸಪ್ರು, ಖ್ಯಾತ ನ್ಯಾಯವಾದಿ ಮತ್ತು ರಾಷ್ಟ್ರನಾಯಕ

# ಹೇಮಾವತಿ ಜಲಾಶಯ ಆವರಣದಲ್ಲಿ ಬೃಂದಾವನ ನಿರ್ಮಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗೊರೂರಿನ ಹೇಮಾವತಿ ಜಲಾಶಯ ಮುಂಭಾಗ ಕೆಆರ್‌ಎಸ್ ಮಾದರಿಯಲ್ಲಿ ಬೃಂದಾವನ ನಿರ್ಮಿಸಲು ಬಜೆಟ್‌ನಲ್ಲಿ ಅನುದಾನ ಘೋಷಿಸಬೇಕೆಂದು ಗೊರೂರು ಬೃಂದಾವನ ಹೋರಾಟ ಸಮಿತಿ ಗೌರವಾಧ್ಯಕ್ಷ ಹೇಮರಾಜು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಹೇಮಾವತಿ ಜಲಾಶಯ ಹಾಸನ ಮಾತ್ರವಲ್ಲದೆ ಪಕ್ಕದ ತುಮಕೂರು, ಮಂಡ್ಯ ಜಿಲ್ಲೆಯ ಜೀವನಾಡಿಯಾಗಿದೆ. ಇಲ್ಲಿ ಬೃಂದಾವನ ನಿರ್ಮಿಸುವ ಬೇಡಿಕೆ ದಶಕಗಳಿಂದ ಇದೆ. 2025ರ ಡಿ. 6ರಂದು ಹಾಸನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೆಆರ್‌ಎಸ್ ಮಾದರಿಯಲ್ಲಿ ಬೃಂದಾವನ ನಿರ್ಮಿಸುವುದಾಗಿ ಭರವಸೆ ನೀಡಿದ್ದಾರೆ. ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ 500 ಕೋಟಿ ರೂ. ಅನುದಾನ ಮೀಸಲಿಟ್ಟು ಯೋಜನೆ ಕಾರ್ಯಗೊಳಿಸಬೇಕೆಂದು ಆಗ್ರಹಿಸಿದರು.

ಹೇಮಾವತಿ ಜಲಾಶಯ ನೀರಾವರಿ ಉದ್ದೇಶದಿಂದ ಮಾತ್ರವಲ್ಲದೆ ಪ್ರವಾಸಿ ದೃಷ್ಟಿಯಿಂದಲೂ ಪ್ರಶಸ್ತ ಸ್ಥಳವಾಗಿದೆ. ಪ್ರತಿವರ್ಷ ಕ್ರಸ್ಟ್‌ಗೇಟ್ ಮೂಲಕ ನೀರು ಹರಿಸುವಾಗ ಸಾವಿರಾರು ಜನರು ಜಲಧಾರೆ ವೀಕ್ಷಣೆಗೆ ಬರುತ್ತಾರೆ. ಗೊರೂರು, ಶೆಟ್ಟಿಹಳ್ಳಿ, ಹಾಲುವಾಗಿಲು ಕಟ್ಟೆ ಹೀಗೆ ಸಮೀಪದ ಪ್ರವಾಸಿ ತಾಣಕ್ಕೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಬರುವುದರಿಂದ ಆಕರ್ಷಕ ಬೃಂದಾವನ ನಿರ್ಮಿಸಿದರೆ ಸ್ಥಳೀಯರಿಗೆ ಅನುಕೂಲವಾಗುತ್ತದೆ ಎಂದರು.

ಸಮಿತಿಯ ಜಗದೀಶ್, ಬಂಗಾರಿಗೌಡ, ಮಲ್ಲೇಶ್, ಲಿಂಗರಾಜು ಇದ್ದರು.

# ಗುರುವನ್ನು ಮೀರಿಸುವಷ್ಟು ಎತ್ತರಕ್ಕೆ ವಿದ್ಯಾರ್ಥಿ ಬೆಳೆಯಬೇಕು


**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಗುರುವನ್ನು ಮೀರಿಸುವಷ್ಟು ಮಟ್ಟಕ್ಕೆ ಶಿಷ್ಯರು ಬೆಳೆದರೆ ಮಾತ್ರ ಗುರುವಿನ ಬದುಕು ಸಾರ್ಥಕ ಎಂದು ನಿವೃತ್ತ ಶಿಕ್ಷಕ ಎಚ್.ಎಚ್.ಸತೀಶ್ ಹೇಳಿದರು.

ತಾಲೂಕಿನ ಬಾಗೂರು ಸರ್ಕಾರಿ ಪ್ರೌಢಶಾಲೆಯಲ್ಲಿ 1996-97ನೇ ಸಾಲಿನ ವಿದ್ಯಾರ್ಥಿಗಳಿಂದ ಏರ್ಪಡಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಮಾತನಾಡಿ, ಶಿಷ್ಯರ ಬದುಕು ದಡ ಮುಟ್ಟಿದರೆ ಮಾತ್ರ ಗುರುಗಳಿಗೆ ನೆಮ್ಮದಿ ಎಂದರು.

ಉದ್ಯಮಿ ಅಣತಿ ಯೋಗೇಶ್ ಮಾತನಾಡಿ, ಗುರುವಿನ ಮಾರ್ಗದರ್ಶನವಿಲ್ಲದೆ ಬದುಕಿನಲ್ಲಿ ಗುರಿ ಮುಟ್ಟಲು ಸಾಧ್ಯವಿಲ್ಲ. ಗುರುವಿನ ಮಾತು ಎಂದಿಗೂ ಸುಳ್ಳಾಗುವುದಿಲ್ಲ. ಗುರುವಿನ ನಿಸ್ವಾರ್ಥದ ಸೇವೆ ಶಿಷ್ಯರ ಬದುಕಿನ ಮೆಟ್ಟಿಲು ಹಾಗೂ ದಾರಿ ದೀಪವಾಗಲಿದೆ ಎಂದರು.

ಗುರುವಂದನ ಕಾರ್ಯಕ್ರಮ ಪ್ರತಿಯೊಬ್ಬ ವಿದ್ಯಾರ್ಥಿಯ ಕಳೆದು ಹೋದ ಹಳೆ ದಿನಗಳ ಮೆಲುಕು ಹಾಕುವ ವೇದಿಕೆಯಾಗಲಿದೆ. ಕಲಿತು ಉನ್ನತ ಹುದ್ದೆಗಳನ್ನು ಅಲಂಕರಿಸಿರುವ ವಿದ್ಯಾರ್ಥಿಗಳು ತಮ್ಮ ಶಾಲೆಗಳತ್ತ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.



ಹಳೆ ವಿದ್ಯಾರ್ಥಿನಿ ಜೆ.ಸಿ.ಸವಿತಾ ಮಾತನಾಡಿ, ಶಿಲ್ಪಿಯು ಕೆತ್ತಿ ಶಿಲೆಯಾಗಿ ರೂಪಿಸುವ ಕಗ್ಗಲ್ಲು ದೇಗುಲದ ಗರ್ಭಗುಡಿಯಲ್ಲಿ ಮೂರ್ತಿಯಾಗಿ ನಿಲ್ಲಲಿದೆ. ಅದೇ ರೀತಿ ಗುರುವು ಅಪಾರ ಜ್ಞಾನವನ್ನು ನೀಡಿ ರೂಪಿಸುವ ಶಿಷ್ಯರ ಬದುಕು ಸಮಾಜದ ಉತ್ತುಂಗದಲ್ಲಿ ಶಿಖರದ ಕಳಶವಾಗಿ ಸ್ಥಾಪನೆಯಾಗಲಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗುರುಗಳು ಕಲಿಸಿದ ವಿದ್ಯೆಯಿಂದ ನಾವೆಲ್ಲರೂ ಬದುಕಿನ ದಡವನ್ನು ಯಶಸ್ವಿಯಾಗಿ ಮುಟ್ಟಿದ್ದೇವೆ. ನಮ್ಮ ಬದುಕು ಗುರುಗಳು ನೀಡಿದ ಭಿಕ್ಷೆಯಾಗಿದೆ. ಗುರುಗಳಿಗೆ ಕೇವಲ ಸನ್ಮಾನ ಮಾಡುವ ಮೂಲಕ ಅವರ ಋಣ ತೀರಿಸಲು ಸಾಧ್ಯವಿಲ್ಲ. ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ಅವರಿಂದ ಕಲಿತ್ತಿರುವ ವಿದ್ಯೆಯನ್ನು ಸದ್ಬಳಕೆ ಮಾಡಿಕೊಂಡು ಸಮಾಜ ಸೇವೆ ಮಾಡುವ ಮೂಲಕ ಗುರುವಿನ ಋಣ ತೀರಿಸುವ ಪ್ರಯತ್ನ ಮಾಡೋಣ ಎಂದು ಹಳೆಯ ವಿದ್ಯಾರ್ಥಿಗಳಾದ ಕೃಷ್ಣೇಗೌಡ, ಹೇಮರಾಜ್, ದೊರೆ ಹಾಗೂ ಇತರರು ತಮ್ಮ ಅನಿಸಿಕೆಯನ್ನು ವೇದಿಕೆಯ ಮೇಲೆ ಹಂಚಿಕೊಂಡರು.

1996-97ನೇ ಸಾಲಿನಲ್ಲಿ ಇದೇ ಶಾಲೆಯಲ್ಲಿ ಶಿಕ್ಷಣ ಪಡೆದು ಇಂದು ಉನ್ನತ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಜೆ.ಸಿ.ಸವಿತಾ, ರಘುನಾಥ್, ರಾಘವೇಂದ್ರ ಹಾಗೂ ರಂಗನಾಥ್ ಅವರನ್ನು ಅಭಿನಂದಿಸಲಾಯಿತು.

ನಂತರ 1996-97ನೇ ಸಾಲಿನಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಹೆಚ್.ಹೆಚ್. ಸತೀಶ್, ಸೂರ್ಯನಾರಾಯಣ್, ಹಲಗೆ ಗೌಡ್ರು, ರಾಮಸ್ವಾಮಿ, ವಿಜಯಕುಮಾರಿ ಹಾಗೂ ದೇವರಾಜ್ ಅವರಿಗೆ ಗುರು ವಂದನಾ ಸಲ್ಲಿಸಲಾಯಿತು.

ನಿಧನರಾಗಿರುವ ನಿವೃತ್ತ ಶಿಕ್ಷಕರಾದ ಪುಟ್ಟರಂಗೇಗೌಡ ಹಾಗೂ ನಾಗೇಶ್ ಅವರಿಗೆ ಸಂತಾಪ ಸೂಚಿಸಲಾಯಿತು. ಹಳೆ ವಿದ್ಯಾರ್ಥಿಗಳಾದ ಎಂ.ಎಂ. ಸಂತೋಷ್, ಯತೀಶ್, ಕೃಷ್ಣ, ರಂಗನಾಥ್, ದೊರೆರಾಜು, ವಿಜಯಕುಮಾರ್, ಗೀತಾ, ರಾಧಾ, ಶೈಲಜಾ, ದ್ರಾಕ್ಷಾಯಿಣಿ, ಮಂಜುಳಾ ಹಾಗೂ ಇತರರು ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248